ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ ದಿನಾಂಕ : DATE : 5/7/19

[illegible]

# ಕುತೂಹಲ ಕೇಂದ್ರವಾದ ಸ್ಪೀಕರ್ ಕಚೇರಿ

**ಬೆಂಗಳೂರು:** ವಿಧಾನಸಭಾಧ್ಯಕ್ಷ ರಮೇಶ್‌ಕುಮಾರ್ ಕಚೇರಿ ಗುರುವಾರ ಕುತೂಹಲದ ಕೇಂದ್ರವಾಗಿತ್ತು. ಕಾಂಗ್ರೆಸ್ ಮತ್ತು ಬಿಜೆಪಿ ಮುಖಂಡರು ಸರದಿಯಂತೆ ಸ್ಪೀಕರ್ ಭೇಟಿ ಮಾಡಿ, ಶಾಸಕರ ರಾಜೀನಾಮೆ ಬಗ್ಗೆ ಚರ್ಚೆ ನಡೆಸಿದರು.

ಬೆಳಗ್ಗೆ ಉಪಮುಖ್ಯಮಂತ್ರಿ ಜಿ.ಪರಮೇಶ್ವರ್, ಕೆಪಿಸಿಸಿ ಕಾರ್ಯಾಧ್ಯಕ್ಷ ಈಶ್ವರಖಂಡ್ರೆ ಮತ್ತು ಸಚಿವ ಶಿವಾನಂದ ಪಾಟೀಲ್ ಸ್ಪೀಕರ್ ಭೇಟಿಯಾದರು. ಶಾಸಕ ಆನಂದ್ ಸಿಂಗ್ ರಾಜೀನಾಮೆ ಬಗ್ಗೆ ಕೆಪಿಸಿಸಿ ಆಕ್ಷೇಪ ವ್ಯಕ್ತಪಡಿಸಿ ಪತ್ರ ಸಲ್ಲಿಸಿದೆ ಎಂದು ತಿಳಿದುಬಂದಿದೆ.



ಬಳಿಕ ಮಾತನಾಡಿದ ಪರಮೇಶ್ವರ್, ಜು.12ರಿಂದ ಮಳೆಗಾಲದ ಅಧಿವೇಶನ ಪ್ರಾರಂಭವಾಗಲಿದೆ. ಸಂಸದೀಯ ಸಚಿವ ಜವಾಬ್ದಾರಿಯೂ ನನಗಿರುವ ಕಾರಣ ಈ ಬಗ್ಗೆ ಚರ್ಚೆ ಮಾಡಲು ಬಂದಿದ್ದೆ ಎಂದಷ್ಟೇ ಸಮಜಾಯಿಷಿ ನೀಡಿದರು. ಆನಂದ್‌ಸಿಂಗ್ ರಾಜೀನಾಮೆ ಬಗ್ಗೆ ಚರ್ಚೆ ಮಾಡಲು ಬಂದಿದ್ದೆ. ಅವರು ನಮ್ಮ ಪಕ್ಷದ ಬಿ ಫಾರಂ ಪಡೆದು ವಿಜಯನಗರ ಕ್ಷೇತ್ರದಿಂದ ಆಯ್ಕೆಯಾಗಿದ್ದಾರೆ. ಆದರೆ ಈತನಕ ಪಕ್ಷಕ್ಕೆ ರಾಜೀನಾಮೆ ಪತ್ರ ಕಳುಹಿಸಿಲ್ಲ. ಆದರೆ, ಸ್ಪೀಕರ್‌ಗೆ ನಾವಿನ್ನೂ ದೂರು ಕೊಟ್ಟಿಲ್ಲ. ಮಾಹಿತಿ ಪಡೆದುಕೊಂಡಿದ್ದೇವೆ ಅಷ್ಟೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

**ಬಿಜೆಪಿ ನಾಯಕರ ಭೇಟಿ:** ಏತನ್ಮಧ್ಯೆ ಬಿಜೆಪಿ ಶಾಸಕ ಸಿ.ಟಿ.ರವಿ ನೇತೃತ್ವದಲ್ಲಿ ಶಾಸಕರಾದ ಪ್ರೀತಂಗೌಡ ಮತ್ತು ಬೆಳ್ಳಿ ಪ್ರಕಾಶ್ ಸ್ಪೀಕರ್ ಭೇಟಿ ಮಾಡಿದರು. ಆದರೆ ಚರ್ಚಿತ ವಿವರಗಳ ಬಗ್ಗೆ ಮಾಹಿತಿ ನೀಡಲಿಲ್ಲ. ಸ್ಪೀಕರ್ ರಮೇಶ್‌ಕುಮಾರ್ ತಮ್ಮ ಕಚೇರಿ ಪಕ್ಕದಲ್ಲೇ ಇರುವ ಸಿದ್ದರಾಮಯ್ಯ ಕಚೇರಿಯಲ್ಲಿ ಕುಳಿತು ಅಧಿಕಾರಿಗಳ ಸಭೆ ನಡೆಸುತ್ತಿದ್ದರು. ಸ್ಪೀಕರ್ ಭೇಟಿಗೆ ಬಂದಿದ್ದ ಬಿಜೆಪಿ ನಾಯಕರು, ಸಿದ್ದರಾಮಯ್ಯ ಕಚೇರಿಗೆ ಹೋಗಲು ಒಪ್ಪಲಿಲ್ಲ. ಬದಲಿಗೆ ಸ್ಪೀಕರ್ ಕಚೇರಿಯಲ್ಲಿಯೇ ಕಾಯ್ದು ಕುಳಿತರು. ಸುದ್ದಿಗಾರರೊಂದಿಗೆ ಮಾತನಾಡಿದ ರಮೇಶ್‌ಕುಮಾರ್, ಮಾಡಕ್ಕೆ ಕೆಲಸವಿಲ್ಲದವರು ರಾಜೀನಾಮೆ ಕೊಡ್ತಾರೆ ಎಂದು ಮತ್ತೊಮ್ಮೆ ಆಕ್ರೋಶ ವ್ಯಕ್ತಪಡಿಸಿದರು.

**ಸ್ಪೀಕರ್ ಬೇಸರ:** ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಅವರ ಆಡಿಯೋ ಬಗ್ಗೆ ತನಿಖೆ ನಡೆಸಲು ಎಸ್‌ಐಟಿ ರಚನೆ ಮಾಡಲು ವಿಳಂಬ ಮಾಡಿರುವ ಸರ್ಕಾರದ ಕ್ರಮದ ಬಗ್ಗೆ ಸ್ಪೀಕರ್ ರಮೇಶ್‌ಕುಮಾರ್ ಬೇಸರ ವ್ಯಕ್ತಪಡಿಸಿದ್ದಾರೆ.

ನನ್ನನ್ನು ಎಲ್ಲರೂ ದೂರವಾಣಿಯಲ್ಲಿ ಸಂಪರ್ಕಿಸುತ್ತಿದ್ದಾರೆ. ಆದರೆ ಮುಖ್ಯಮಂತ್ರಿ ಅಮೆರಿಕದಿಂದ ವಾಪಸಾದ ನಂತರ ಅವರ ಜತೆ ಚರ್ಚಿಸುತ್ತೇನೆ. ನನ್ನ ಬೇಡಿಕೆ ಈಡೇರಿಸಿದರೆ ಮಾತ್ರ ಮುಂದಿನ ತೀರ್ಮಾನ ಕೈಗೊಳ್ಳುತ್ತೇನೆ.

| ಆನಂದ್ ಸಿಂಗ್ ವಿಜಯನಗರ ಶಾಸಕ

ಬಿಜೆಪಿಯವರು ಹಣದ ಆಸೆ ತೋರಿಸಿ ಶಾಸಕರನ್ನು ಸೆಳೆಯುವ ಪ್ರಯತ್ನ ಮಾಡುತ್ತಿದ್ದಾರೆ. ಇದರಲ್ಲಿ ಸಂಶಯವಿಲ್ಲ. ಆದರಿದು ಯಶಸ್ವಿಯಾಗುವುದಿಲ್ಲ. ಜೆಡಿಎಸ್ ರಾಜ್ಯಾಧ್ಯಕ್ಷ ಹುದ್ದೆ ನಿಭಾಯಿಸಲಾಗದೆ ಕೇವಲ ಆರು ತಿಂಗಳಿಗೆ ರಾಜೀನಾಮೆ ನೀಡಿರುವ ಶಾಸಕ ಎಚ್.ವಿಶ್ವನಾಥ್ ಸಮನ್ವಯ ಸಮಿತಿ ಬಗ್ಗೆ ಏನು ಮಾತನಾಡುತ್ತಾರೆ?

| ಸಿದ್ದರಾಮಯ್ಯ ಸಮನ್ವಯ ಸಮಿತಿ ಅಧ್ಯಕ್ಷ

4